ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 939

ಸದಸ್ಯರ ಹೆಸರು : ಎನ್.ಎಸ್.ಬೋಸ್‌ರಾಜು

(ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರಿಸುವ ದಿನಾಂಕ : 12.03.2020.

ಉತ್ತರಿಸುವ ಸಚಿವರು : ಮಾನ್ಯ ಮುಖ್ಯಮಂತ್ರಿಯವರು

ಕ್ರ.ಸಂ	ಪ್ರಶ್ನೆ	ಉತ್ತರ
(ಅ)	ಪ್ರಾದೇಶಿಕ ಪತ್ರಿಕೆಗಳನ್ನು ಪ್ರೋತ್ಸಾಹಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;	ಪ್ರಾದೇಶಿಕ ಪತ್ರಿಕೆಗಳನ್ನು ಪ್ರೋತ್ಸಾಹಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳ ವಿವರ : • ಪ್ರಾದೇಶಿಕ ಪತ್ರಿಕೆಗಳನ್ನು ಪ್ರೋತ್ಸಾಹಿಸಲು ಜಾಹೀರಾತು ಅನುಷ್ಠಾನ ನಿಯಮಗಳು-2014ನ್ನು ಜಾರಿಗೆ ತರಲಾಗಿದೆ. • ಸದರಿ ನಿಯಮಗಳನ್ವಯ ಪ್ರಾದೇಶಿಕ ಪತ್ರಿಕೆಗಳಿಗೆ ಪ್ರತಿ ಚ.ಸೆಂ.ಮೀ ಗೆ ಕನಿಷ್ಠ ರೂ.36/-ರಿಂದ ಗರಿಷ್ಠ ರೂ. 74/-ಕ್ಕೆ ನಿಗದಿಪಡಿಸುವ ಮೂಲಕ ಶೇ 50 ರಷ್ಟು ಜಾಹೀರಾತು ದರ ಏರಿಸಲಾಗಿದೆ. • ಪ್ರಾದೇಶಿಕ ಪತ್ರಿಕೆಗಳಿಗೆ ಪ್ರತಿ 2 ವರ್ಷಕ್ಕೊಮ್ಮೆ ಶೇ.12 ರಷ್ಟು ಜಾಹೀರಾತು ದರವನ್ನು ಏರಿಕೆ ಮಾಡಲಾಗುತ್ತದೆ. • ರೂ.50.00 ಲಕ್ಷಗಳ ಮೊತ್ತದವರೆಗಿನ ಟೆಂಡರ್ ಗಳನ್ನು ಪ್ರಾದೇಶಿಕ ಪತ್ರಿಕೆಗಳಿಗೆ ಬಿಡುಗಡೆ ಮಾಡಲಾಗುತ್ತದೆ. • ಪ್ರಾದೇಶಿಕ ಪತ್ರಿಕೆಗಳಿಗೆ ಕಾಲಿಕಾಲಕ್ಕೆ ಆಕರ್ಷಕ ಜಾಹೀರಾತುಗಳನ್ನು ಬಿಡುಗಡೆ ಮಾಡಲಾಗುತ್ತಿದೆ.
(ಆ)	ಗ್ರಾಮೀಣ ಪತ್ರಕರ್ತರಿಗೆ ಉಚಿತ ಬಸ್ ಪಾಸ್ ಸೌಲಭ್ಯ ನೀಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;	ಗ್ರಾಮೀಣ ಪತ್ರಕರ್ತರಿಗೆ ಉಚಿತ ಬಸ್ ಪಾಸ್ ನೀಡುವ ಪ್ರಸ್ತಾವನೆ ಸರ್ಕಾರದ ಪರಿಶೀಲನಾ ಹಂತದಲ್ಲಿದೆ.
(ಇ)	ಮಾಧ್ಯಮಗಳ ಜಾಹೀರಾತು ನೀತಿ ಕಾರ್ಯರೂಪಕ್ಕೆ ತರಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;	ಸರ್ಕಾರದ ಆದೇಶ ಸಂಖ್ಯೆ: ಕಸಂವಾಪ್ರ/69/ ವಾಪ್ರಜಾ/2013, ದಿ:10-09-2017ರಲ್ಲಿ ಜಿಲ್ಲಾ ಮತ್ತು ಪ್ರಾದೇಶಿಕ ಪತ್ರಿಕೆಗಳ ಬೆಳವಣಿಗೆಗೆ ಪೂರಕವಾಗಿ ಜಾಹೀರಾತು ಅನುಷ್ಠಾನ ನಿಯಮಗಳು- 2014ನ್ನು ಜಾರಿಗೆ ತರಲಾಗಿದ್ದು, ಇವುಗಳ ಪರಿಷ್ಕರಣೆಗಾಗಿ ಪತ್ರಿಕಾ ಸಂಘ ಸಂಸ್ಥೆಗಳಿಂದ ಸಲಹೆಗಳನ್ನು ಆಹ್ವಾನಿಸಿದ್ದ ಮೇರೆಗೆ ಸಂಘ ಸಂಸ್ಥೆಗಳಿಂದ ಸಲಹೆಗಳು ಸ್ವೀಕೃತವಾಗಿದ್ದು, ಜಾಹೀರಾತು ಅನುಷ್ಠಾನ ನಿಯಮಗಳ ಪರಿಷ್ಕರಣೆಯು ಪರಿಶೀಲನಾ ಹಂತದಲ್ಲಿದೆ.
(ಈ)	ವರದಿಗಾರರಿಗೆ ನಿವೇಶನ ನೀಡುವ ಪ್ರಸ್ತಾವನೆ ಸರ್ಕಾರದ ಹಂತದಲ್ಲಿ ಇದೆಯೇ; ಸರ್ಕಾರ ತೆಗೆದುಕೊಂಡ ಕ್ರಮಗಳೇನು?	ವರದಿಗಾರರಿಗೆ ನಿವೇಶನ ನೀಡುವ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ.

KCI-PIP/56/2020-INFO-KC-SEC

ಬಿ.ಎಸ್. ಯಡಿಯೂರಪ್ಪ

(ಬಿ.ಎಸ್.ಯಡಿಯೂರಪ್ಪ)

ಮುಖ್ಯಮಂತ್ರಿ.